**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 27 ಎಂಎಂಎಸ್ 2001

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡಗಳು,
ಬೆಂಗಳೂರು, ದಿನಾಂಕ: 0[illegible]-2-2002.

## ಸುತ್ತೋಲೆ

ವಿಷಯ:- ಮಧ್ಯಾಹ್ನ ಉಪಹಾರ ಯೋಜನೆಯಡಿ ಬಿಸಿ ಊಟ: ಉಪಹಾರ ನೀಡುವ ಸ್ವಯಂ ಸೇವಾ ಸಂಸ್ಥೆಗಳಿಗೆ ಅಕ್ಕಿ ಮತ್ತು ಸಾಗಾಣಿಕೆ ವೆಚ್ಚವನ್ನು ನೀಡುವ ಬಗ್ಗೆ.

– – –

ಸಾಮಾಜಿಕ ಸಂಘ ಸಂಸ್ಥೆಗಳು, ಸ್ವಯಂ ಸೇವಾ ಸಂಸ್ಥೆಗಳು, ಧರ್ಮದತ್ತಿ ಸಂಸ್ಥೆಗಳು ಮತ್ತು ಶಾಲಾಭಿವೃದ್ಧಿ ಸಮಿತಿಗಳು ಹೀಗೆ ಹಲವಾರು ಸಮಾಜದ ಸಂಘ ಸಂಸ್ಥೆಗಳು ಮಧ್ಯಾಹ್ನದ ವೇಳೆಯಲ್ಲಿ ಶಾಲಾ ಮಕ್ಕಳಿಗೆ ಊಟ ಮತ್ತು ಉಪಹಾರವನ್ನು ನೀಡಲು ಮುಂದೆ ಬಂದಿರುತ್ತವೆ. ಇದೊಂದು ಉತ್ತಮ ಬೆಳವಣಿಗೆಯಾಗಿದ್ದು ಇಂತಹ ಸಂಘ ಸಂಸ್ಥೆಗಳನ್ನು ಪ್ರೋತ್ಸಾಹಿಸಬೇಕಾಗಿರುವುದು ಸರ್ಕಾರದ ಆದ್ಯ ಕರ್ತವ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ಪ್ರಾಥಮಿಕ ಶಾಲಾ ಮಕ್ಕಳಿಗೆ ಪೌಷ್ಟಿಕ ನೆರವು ನೀಡುವ ರಾಷ್ಟ್ರೀಯ ಕಾರ್ಯಕ್ರಮದಡಿ ಕೇಂದ್ರ ಸರ್ಕಾರವು ತನ್ನ ಪತ್ರಸಂಖ್ಯೆ: 6-10:2001 ಎಸ್‌ಎಸ್‌ಬಿ (ಎಂಡಿಎಂ), ದಿನಾಂಕ:09-03-2001ರಲ್ಲಿ ಹೊರಡಿಸಿರುವ ಮಾರ್ಗಸೂಚಿಯನ್ವಯ ಕೇಂದ್ರ ಸರ್ಕಾರವು ನೀಡುವ ಆಹಾರಧಾನ್ಯವನ್ನು ಬಿಸಿ ಊಟವನ್ನಾಗಿ ಪರಿವರ್ತಿಸಿ ಶಾಲಾ ಮಕ್ಕಳಿಗೆ ನೀಡಲು ಮುಂದೆ ಬರುವಂತಹ ಸಂಘಸಂಸ್ಥೆಗಳಿಗೆ ಅಂಗೀಕಾರಾರ್ಹ: ಲಭ್ಯ ಇರುವ ಅಕ್ಕಿ ಮತ್ತು ಸಾಗಾಣಿಕೆ ವೆಚ್ಚವನ್ನು ನೀಡಬಹುದೆಂದು ತಿಳಿಸಿದೆ. ಆದಕಾರಣ ಮಧ್ಯಾಹ್ನ ಉಪಹಾರ ಯೋಜನೆಯಡಿ ಶಾಲಾ ಮಕ್ಕಳಿಗೆ ಬಿಸಿ ಊಟವನ್ನು ಉಪಹಾರವನ್ನು ನೀಡಲು ಮುಂದೆ ಬರುವಂತಹ ಸಂಘ ಸಂಸ್ಥೆಗಳನ್ನು ಪ್ರೋತ್ಸಾಹಿಸುವ ಸಲುವಾಗಿ ಈ ಬಗ್ಗೆ ಸಂಘ ಸಂಸ್ಥೆಗಳಿಂದ ಮನವಿ ಬಂದಲ್ಲಿ ಅವರುಗಳ ಮನವಿಯನ್ನು ಪರಿಶೀಲಿಸಿ ಅಂತಹ ಸಂಸ್ಥೆಗಳ ಸಾಮರ್ಥ್ಯವನ್ನು ನಿರ್ಧರಿಸಿ ಕೇಂದ್ರ ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಯನ್ವಯ ಅಂಗೀಕಾರಾರ್ಹ:ಲಭ್ಯ ಇರುವ ಅಕ್ಕಿ ಮತ್ತು ಸಾಗಾಣಿಕೆ ವೆಚ್ಚವನ್ನು ಪಡೆಯಲು ಸಂಘ ಸಂಸ್ಥೆಗಳಿಗೆ ಪರವಾನಿಗೆ:ಅನುಮತಿ ನೀಡುವ ಅಧಿಕಾರವನ್ನು ಜಿಲ್ಲಾ ಮಟ್ಟದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರುಗಳಿಗೆ ನೀಡಲಾಗಿದೆ ಎಂದು ಈ ಮೂಲಕ ತಿಳಿಸಿದೆ. ಸರ್ಕಾರದ ಅನುಮತಿಯನ್ನು ಪಡೆಯಲೇಬೇಕಾದಂತಹ ಸಂದರ್ಭ ಬಂದಲ್ಲಿ ಅಂತಹ ಪ್ರಕರಣಗಳನ್ನು ಹೊರತುಪಡಿಸಿ ಉಳಿದ ಪ್ರಕರಣಗಳ ಬಗ್ಗೆ ಸರ್ಕಾರದ ಅನುಮತಿಗಾಗಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವ ಅಗತ್ಯತೆ ಇಲ್ಲವೆಂದು ಸಹ ತಿಳಿಸಲಾಗಿದೆ. ಒಂದು ವೇಳೆ ಈ ರೀತಿ ನೀಡಲಾದ ಅಕ್ಕಿ ಮತ್ತು ಸಾಗಾಣಿಕೆ ವೆಚ್ಚವನ್ನು ದುರುಪಯೋಗ ಮಾಡಿಕೊಂಡಿರುವುದು ಕಂಡುಬಂದಲ್ಲಿ ಅಂತಹ ಸಂಘ ಸಂಸ್ಥೆಗಳನ್ನು ಕಪ್ಪುಪಟ್ಟಿಯಲ್ಲಿ ಸೇರಿಸಿ ತಕ್ಷಣವೇ ನೀಡಿರುವ ಅನುಮತಿಯನ್ನು ರದ್ದು ಪಡಿಸುವ ಅಧಿಕಾರವನ್ನು ಸಹ ಜಿಲ್ಲಾ ಉಪ ನಿರ್ದೇಶಕರುಗಳಿಗೆ ನೀಡಲಾಗಿದೆ ಎಂದು ಈ ಮೂಲಕ ತಿಳಿಸಲಾಗಿದೆ.

( ಕೆ. ಶ್ರೀಕಂಠೇಗೌಡ. )
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ (ಯೋಜನೆ),
ಶಿಕ್ಷಣ ಇಲಾಖೆ.

**ಇವರಿಗೆ:**

1) ಎಲ್ಲಾ ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರುಗಳಿಗೆ
2) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
3) ಸಹ ನಿರ್ದೇಶಕರು, (ಮಧ್ಯಾಹ್ನ ಉಪಹಾರ ಯೋಜನೆ), ಸಾರ್ವಜನಿಕ ಶಿಕ್ಷಣ ಇಲಾಖೆ, ಕೆ.ಜಿ. ಬೆಂಗಳೂರು.